# ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ, ಇತರೆ ಪರೀಕ್ಷೆಗಳು, ಮಲ್ಲೇಶ್ವರಂ, ಬೆಂಗಳೂರು

ಸಂಖ್ಯೆ:ವಿ1/ವಿ.ಸ.ನೃ.ತಾ.ಪ/ಅ.ಸೂ/32/2022-23 ದಿನಾಂಕ:18.10.2022

**ಸುತ್ತೋಲೆ**

**ವಿಷಯ:-**ಡಿಸೆಂಬರ್ 2022 ರ ವಿಶೇಷ ಸಂಗೀತ ನೃತ್ಯ ಹಾಗೂ ತಾಳವಾದ್ಯ ಪರೀಕ್ಷೆಗೆ ಸಂಬಂಧಿಸಿದಂತೆ ಆನ್‌ಲೈನ್ ಮೂಲಕ ಅರ್ಜಿಗಳನ್ನು ನೋಂದಾಯಿಸುವ ದಿನಾಂಕವನ್ನು ವಿಸ್ತರಿಸುವ ಬಗ್ಗೆ.

**ಉಲ್ಲೇಖ:-**ಅಧಿಸೂಚನೆ ಸಂಖ್ಯೆ:ವಿ1/ವಿ.ಸ.ನೃ.ತಾ.ಪ/ಅ.ಸೂ/32/2022-23 ದಿನಾಂಕ:14.09.2022

************

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಡಿಸೆಂಬರ್ 2022 ರ ಮಾಹೆಯಲ್ಲಿ ನಡೆಯಲಿರುವ ವಿಶೇಷ ಸಂಗೀತ ನೃತ್ಯ, ಹಾಗೂ ತಾಳವಾದ್ಯ ಪರೀಕ್ಷೆಗೆ ಸಂಬಂಧಿಸಿದಂತೆ ಆನ್‌ಲೈನ್ ಮೂಲಕ ಅರ್ಜಿಗಳನ್ನು ನೋಂದಾಯಿಸಲು ದಿನಾಂಕ:01.10.2022 ರಿಂದ 20.10.2022 ರವರೆಗೆ ಮತ್ತು ದಂಡ ಶುಲ್ಕ ದಿನ ಒಂದಕ್ಕೆ ರೂ.150/- ರಂತೆ ದಿನಾಂಕ:21.10.2022 ರಿಂದ 25.10.2022 ರವರೆಗೆ ಅವಕಾಶ ಕಲ್ಪಿಸಲಾಗಿತ್ತು.

ಆದರೆ ಪ್ರಸ್ತುತ ವಿದ್ಯಾರ್ಥಿಗಳು, ಪೋಷಕರು ಮತ್ತು ಶಿಕ್ಷಕರುಗಳಿಂದ ಆನ್‌ಲೈನ್ ಅರ್ಜಿಗಳನ್ನು ಸಲ್ಲಿಸುವ ದಿನಾಂಕವನ್ನು ವಿಸ್ತರಿಸಲು ಕೋರಿಕೆಗಳು ಬಂದ ಹಿನ್ನಲೆಯಲ್ಲಿ ಆನ್‌ಲೈನ್ ಅರ್ಜಿಗಳನ್ನು ನೋಂದಾಯಿಸುವ ದಿನಾಂಕಗಳನ್ನು ಈ ಕೆಳಗಿನಂತೆ ವಿಸ್ತರಿಸಲಾಗಿದೆ.

| ಕ್ರಸಂ | ವಿವರ | ಈಗಾಗಲೇ ನಿಗಧಿಪಡಿಸಿರುವ ದಿನಾಂಕ | ವಿಸ್ತರಣೆ ಮಾಡಿದ ದಿನಾಂಕ |
|---|---|---|---|
| 01 | ಅಭ್ಯರ್ಥಿಗಳು ಮಂಡಳಿಯ ಜಾಲತಾಣದಲ್ಲಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ದಿನಾಂಕ | 01.10.2022 ರಿಂದ 20.10.2022 ರವರೆಗೆ | 21.10.2022 ರಿಂದ 27.10.2022 ರವರೆಗೆ |
| 02 | ದಂಡ ಶುಲ್ಕ ದಿನ ಒಂದಕ್ಕೆ ರೂ.150/- ಗಳೊಂದಿಗೆ ಅರ್ಜಿಗಳನ್ನು ಸ್ವೀಕರಿಸುವ ದಿನಾಂಕ | 21.10.2022 ರಿಂದ 25.10.2022 ರವರೆಗೆ | 28.10.2022 ರಿಂದ 31.10.2022 ರವರೆಗೆ |

ಉಳಿದಂತೆ ದಿನಾಂಕ:14.09.2022 ರ ಅಧಿಸೂಚನೆಯಲ್ಲಿ ನಿಗಧಿಪಡಿಸಿರುವ ದಿನಾಂಕಗಳಲ್ಲಿ ಯಾವುದೇ ಬದಲಾವಣೆಗಳು ಇರುವುದಿಲ್ಲ. ಆದುದರಿಂದ ಮೇಲೆ ನಿಗಧಿಪಡಿಸಿರುವ ದಿನಾಂಕಗಳನ್ವಯ ಅಭ್ಯರ್ಥಿಗಳು ಆನ್‌ಲೈನ್ ಮೂಲಕ ಅರ್ಜಿಗಳನ್ನು ನೋಂದಣಿ ಮಾಡಿಕೊಳ್ಳಲು ಹಾಗೂ ಶುಲ್ಕ ಪಾವತಿಸಲು ಅವಕಾಶವನ್ನು ಕಲ್ಪಿಸಿದ್ದು ಇದರ ಸದುಪಯೋಗವನ್ನು ಪಡೆದುಕೊಳ್ಳಲು ಈ ಮೂಲಕ ತಿಳಿಸಿದೆ.

20/10/2022

**[ಗೋಪಾಲಕೃಷ್ಣ ಹೆಚ್.ಎನ್]**
**ನಿರ್ದೇಶಕರು(ಪರೀಕ್ಷೆಗಳು)**

**ಇವರಿಗೆ,**

1. ವಿಭಾಗೀಯ ಕಾರ್ಯದರ್ಶಿಗಳು, ಬೆಂಗಳೂರು/ಮೈಸೂರು/ಬೆಳಗಾಂ/ಕಲಬುರ್ಗಿ ವಿಭಾಗ ಸಹನಿರ್ದೇಶಕರ ಕಛೇರಿ, ರವರ ಮಾಹಿತಿಗಾಗಿ.
2. ಹಿರಿಯ ಸಹಾಯಕ ನಿರ್ದೇಶಕರು, ಸಂಗೀತ/ನೃತ್ಯ ವಿಭಾಗ, ಆಯುಕ್ತರ ಕಛೇರಿ, ಬೆಂಗಳೂರು ರವರ ಮಾಹಿತಿಗಾಗಿ.

3. ರಾಜ್ಯದ ಎಲ್ಲಾ ಜಿಲ್ಲೆಗಳ ಉಪನಿರ್ದೇಶಕರು (ಅಭಿವೃದ್ಧಿ), ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ ಇವರಿಗೆ ಸೂಕ್ತ ಕ್ರಮಕ್ಕಾಗಿ,
4. ರಾಜ್ಯದ ಎಲ್ಲಾ ಸಂಗೀತ/ನೃತ್ಯ/ತಾಳವಾದ್ಯ ಪರೀಕ್ಷಾ ಕೇಂದ್ರದ ಮುಖ್ಯಸ್ಥರುಗಳಿಗೆ ಸೂಕ್ತ ಕ್ರಮಕ್ಕಾಗಿ.
5. ಶಾಖಾಧಿಕಾರಿಗಳು, ಗಣಕ ಶಾಖೆ
6. ಕಛೇರಿ ಪ್ರತಿ.

**ಪ್ರತಿಯನ್ನು ಗೌರವಪೂರ್ವಕವಾಗಿ ಮಾಹಿತಿಗಾಗಿ ಸಲ್ಲಿಸಿದೆ.**

1. ಮಾನ್ಯ ಪ್ರಧಾನ ಕಾರ್ಯದರ್ಶಿಗಳು, (ಪ್ರಾಥಮಿಕ ಮತ್ತು ಪ್ರೌಢ) ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಮಾನ್ಯ ಆಯುಕ್ತರು ಹಾಗೂ ಅಧ್ಯಕ್ಷರು, ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.